**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2015ರ ಫೆಬ್ರವರಿ ಮಾಹೆಯಲ್ಲಿ ಕೇರಳದ ತಿರುವನಂತಪುರದಲ್ಲಿ ನಡೆಯಲಿರುವ 35ನೇ ರಾಷ್ಟ್ರೀಯ ಕ್ರೀಡಾಕೂಟದ ಪದಕ ವಿಜೇತ ಕರ್ನಾಟಕದ ಕ್ರೀಡಾಪಟುಗಳಿಗೆ ನಗದು ಪುರಸ್ಕಾರ ನೀಡುವ ಕುರಿತು.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಯುಸೇಇ 450 ಯುಸೇಕ್ರೀ 2014, ದಿನಾಂಕ: 15.10.2014

2) ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪತ್ರ ಸಂಖ್ಯೆ: ಡಿವೈಇಎಸ್/ಕ್ರೀಕಪಂ/136/2014-15, ದಿನಾಂಕ: 13.02.2015.

******

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಆದೇಶದಲ್ಲಿ ರಾಷ್ಟ್ರೀಯ ಚಾಂಪಿಯನ್‌ಷಿಪ್, ಇಂಟರ್ ಸ್ಟೇಟ್, ಇಂಟರ್ ಜೋನಲ್ ಫೆಡರೇಷನ್ ಕಪ್‌ಗಳಲ್ಲಿ ಚಿನ್ನದ ಪದಕ ವಿಜೇತರಿಗೆ ರೂ.2.00 ಲಕ್ಷ, ಬೆಳ್ಳಿ ಪದಕ ವಿಜೇತರಿಗೆ ರೂ.1.00 ಲಕ್ಷ ಮತ್ತು ಕಂಚಿನ ಪದಕ ವಿಜೇತರಿಗೆ ರೂ.0.50 ಲಕ್ಷಗಳಿಗೆ ಹೆಚ್ಚಿಸಿ ಆದೇಶಿಸಲಾಗಿದೆ.

2015ನೇ ಸಾಲಿನಲ್ಲಿ 35ನೇ ರಾಷ್ಟ್ರೀಯ ಕ್ರೀಡಾಕೂಟವನ್ನು ಕೇರಳದ ತಿರುವನಂತಪುರದಲ್ಲಿ ಆಯೋಜಿಸಲಾಗಿದೆ. ಸದರಿ ಕ್ರೀಡಾಕೂಟದಲ್ಲಿ ಭಾಗವಹಿಸಲಿರುವ ಕರ್ನಾಟಕದ ಕ್ರೀಡಾ ತಂಡಕ್ಕೆ ದಿನಾಂಕ:28.01.2015ರಂದು ರಾಜ್ಯ ಯುವಕೇಂದ್ರದ ಯವನಿಕಾ ಸಭಾಂಗಣದಲ್ಲಿ ಕ್ರೀಡಾ ಕಿಟ್‌ನ್ನು ಮಾನ್ಯ ಮುಖ್ಯಮಂತ್ರಿಗಳು ವಿತರಿಸುವ ಸಂದರ್ಭದಲ್ಲಿ 35ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಿ ಪದಕ ಗಳಿಸುವ ಕರ್ನಾಟಕ ಕ್ರೀಡಾಪಟುಗಳಿಗೆ ಈ ಕೆಳಕಾಣಿಸಿದಂತೆ ನಗದು ಬಹುಮಾನ ನೀಡುವುದಾಗಿ ಘೋಷಿಸಿರುತ್ತಾರೆ ಎಂದು ನಿರ್ದೇಶಕರು ತಿಳಿಸಿರುತ್ತಾರೆ.

| ಚಿನ್ನದ ಪದಕ | ಬೆಳ್ಳಿ ಪದಕ | ಕಂಚಿನ ಪದಕ |
|---|---|---|
| ರೂ. 5.00 ಲಕ್ಷಗಳು | ರೂ. 3.00 ಲಕ್ಷಗಳು | ರೂ. 2.00 ಲಕ್ಷಗಳು |

ಈ ಹಿನ್ನೆಲೆಯಲ್ಲಿ 35ನೇ ರಾಷ್ಟ್ರೀಯ ಕ್ರೀಡಾಕೂಟದಲ್ಲಿ ಭಾಗವಹಿಸಿ ಪದಕ ವಿಜೇತರಿಗೆ ಈ ಮೇಲಿನಂತೆ ನಗದು ಬಹುಮಾನ ನಿಗಧಿಪಡಿಸಿ ಸರ್ಕಾರಿ ಆದೇಶವನ್ನು ಹೊರಡಿಸುವಂತೆ ಹಾಗೂ ಈ ಸಂಬಂಧದ ಖರ್ಚು ವೆಚ್ಚವನ್ನು 2014-15ನೇ ಸಾಲಿನ ಲೆಕ್ಕಶೀರ್ಷಿಕೆ 2204-00-104-0-02 ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹ 015 ಪೂರಕ ವೆಚ್ಚಗಳು (ಯೋಜನೆ) ಅಡಿಯಲ್ಲಿ ಭರಿಸುವಂತೆ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರು ಮೇಲೆ ಓದಲಾದ (2)ರ ಪತ್ರದಲ್ಲಿ ಸರ್ಕಾರವನ್ನು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಯುಸೇಇ 80 ಯುಸೇಕ್ರೀ 2015,**

**ಬೆಂಗಳೂರು, ದಿನಾಂಕ: 19-06-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2015ನೇ ಸಾಲಿನಲ್ಲಿ 35ನೇ ರಾಷ್ಟ್ರೀಯ ಕ್ರೀಡಾಕೂಟವನ್ನು ಕೇರಳದ ತಿರುವನಂತಪುರದಲ್ಲಿ ಫೆಬ್ರವರಿ ತಿಂಗಳಿನಲ್ಲಿ ಆಯೋಜಿಸಿದ್ದು, ಸದರಿ ಕ್ರೀಡಾಕೂಟದಲ್ಲಿ ಕರ್ನಾಟಕ ರಾಜ್ಯದಿಂದ ಭಾಗವಹಿಸಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಈ ಕೆಳಕಂಡಂತೆ ಬಹುಮಾನವನ್ನು ನೀಡಲು ಆದೇಶಿಸಿದೆ.

| ಚಿನ್ನದ ಪದಕ | ಬೆಳ್ಳಿ ಪದಕ | ಕಂಚಿನ ಪದಕ |
|---|---|---|
| ರೂ. 5.00 ಲಕ್ಷಗಳು | ರೂ. 3.00 ಲಕ್ಷಗಳು | ರೂ. 2.00 ಲಕ್ಷಗಳು |

ಸದರಿ ವೆಚ್ಚವನ್ನು ಲೆಕ್ಕಶೀರ್ಷಿಕೆ 2204-00-104-0-02 ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹ 015 ಪೂರಕ ವೆಚ್ಚಗಳು (ಯೋಜನೆ) ಅಡಿಯಲ್ಲಿ ಒದಗಿಸಿರುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ 02 ಟಿಎಫ್‌ಪಿ 2015, ದಿನಾಂಕ: 09.04.2015ರಲ್ಲಿ ಇಲಾಖಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

| | |
|---|---|
| No. | G-T-38 |
| Date | 20-6-2015 |
| Officer/ Section | D.D (welfare) |
| Director | |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಜಿ.ಹನುಮಂತರಾಯಪ್ಪ) 19/6/2015
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ:

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಪಿ.ಬಿ. ನಂ.5329, ಬೆಂಗಳೂರು.
2. ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ನಿರ್ದೇಶನಾಲಯ, ಬೆಂಗಳೂರು.
3. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಮಾನ್ಯ ಯುವಜನ ಸೇವಾ ಮತ್ತು ಮೀನುಗಾರಿಕೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6. ಆಂತರಿಕ ಆರ್ಥಿಕ ಸಲಹೆಗಾರರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
8. ಸರ್ಕಾರದ ಉಪ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಆಪ್ತ